**"Azadi Ka Amrit Mahotsav"**
**INDIA@75**
**ಕೃಷಿ ವಿಶ್ವ ವಿದ್ಯಾನಿಲಯ**
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು–560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 26.11.2021

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 22.11.2021 | 23.11.2021 | 24.11.2021 | 25.11.2021 | 26.11.2021 |
|---|---|---|---|---|---|
| ಮಳೆ (ಮಿ ಮೀ) | 123.8 | 1.4 | 0 | 2.8 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 28.2 | 30.0 | 29.0 | 27.6 | 26.8 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 17.4 | 17.8 | 17.8 | 18.0 | 17.4 |
| ಮೋಡ ( ಪ್ರಮಾಣ) | 6 | 6 | 6 | 4 | 2 |
| ಆರ್ದ್ರತೆ 7.20 ಬೆ (ಶೇ) | 91 | 90 | 83 | 89 | 89 |
| ಆರ್ದ್ರತೆ 2.20 ಮ (ಶೇ) | 51 | 50 | 60 | 65 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 1.5 | 4.3 | 5.0 | 5.8 | 9.3 |
| ಗಾಳಿಯ ದಿಕ್ಕು ( ಡಿಗ್ರಿ) | 320 | 45 | 45 | 45 | 45 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)
(ದಿನಾಂಕ 27–11–2021 ರಿಂದ 01–12–2021 ವರೆಗೆ)

| ನಿಯತಾಂಕಗಳು | 27.11.2021 | 28.11.2021 | 29.11.2021 | 30.11.2021 | 01.12.2021 |
|---|---|---|---|---|---|
| ಮಳೆ (ಮಿ ಮೀ) | 1 | 3 | 2 | 5 | 7 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 27 | 26 | 28 | 28 | 27 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19 | 19 | 18 | 18 | 18 |
| ಮೋಡ ( ಪ್ರಮಾಣ) | 7 | 7 | 8 | 8 | 8 |
| ಆರ್ದ್ರತೆ 7.20 ಬೆ (ಶೇ) | 89 | 89 | 91 | 91 | 91 |
| ಆರ್ದ್ರತೆ 2.20 ಮ (ಶೇ) | 66 | 66 | 68 | 68 | 68 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4 | 4 | 5 | 5 | 5 |
| ಗಾಳಿಯ ದಿಕ್ಕು ( ಡಿಗ್ರಿ) | 68 | 63 | 36 | 111 | 112 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **26.0-28.0$^{o}$C** ಮತ್ತು ಕನಿಷ್ಠ **18.0-19.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **89-91** % ಇದ್ದು ಮಧ್ಯಾಹ್ನ **66-68** % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4-5** ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

### "ಅನುರಾಧೆ ಬಂದರೆ ಬಿತ್ತಿದಷ್ಟೇ ಬೆಳೆ!"

- ಅನುರಾಧ ಮಳೆಯು ಕಾಲವು ನವೆಂಬರ್ ತಿಂಗಳ 20 ರಿಂದ ಡಿಸೆಂಬರ್ ತಿಂಗಳ 02 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 13.0 ಮಿ.ಮೀ. ವರೆಗೆ ಮಳೆಯಾಗುತ್ತದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| ಸಾಮಾನ್ಯ | | ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ |

| | | |
|---|---|---|
| | | ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು |
| ರಾಗಿ | ಕಾಳು ಬಲಿಯುವ ಮತ್ತು ಕಟಾವು | 1. ಕಟಾವಿಗೆ ಬಂದಿರುವ ರಾಗಿ ತೆನೆಗಳನ್ನು ಕುಡುಗೋಲಿನಿಂದ ಕಟಾವು ಮಾಡಬಹುದು<br>2. ಗಿಡವು ನೆಲಕ್ಕೆ ಬಿದ್ದಿಲ್ಲವಾದಲ್ಲಿ ರಾಗಿ ಕಟಾವು ಮಾಡುವ ಯಂತ್ರದಿಂದ ಕಟಾವು ಮಾಡಬಹುದು<br>3. ಕಟಾವು ಮಾಡಿರುವ ಬೆಳೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಗೋಣಿ ಚೀಲದಲ್ಲಿ ಶೇಖರಿಸಿ |
| ಮೆಕ್ಕೆಜೋಳ | ಕಟಾವು | 1. ಬಲಿತಿರುವ ಮೆಕ್ಕೆಜೋಳದ ತೆನೆಯನ್ನು ಕಟಾವು ಮಾಡಿ<br>2. ಕಟಾವು ಮಾಡಿರುವ ತೆನೆಯನ್ನು ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ |
| ನೆಲಗಡಲೆ | ಕಟಾವು | 1. ನೆಲಗಡಲೆ ಗಿಡಗಳನ್ನು ಬುಡಸಮೇತ ಕೀಳಬೇಕು<br>2. ಗಿಡದಿಂದ ಕಾಯಿಯನ್ನು ಬೇರ್ಪಡಿಸಿ ಬಿಸಿಲಿನಲ್ಲಿ ಚೆನ್ನಾಗಿ ಒಣಗಿಸಿ ಸಂಗ್ರಹಿಸುವುದು |
| ಟೊಮೋಟೋ | ಹಣ್ಣು ಮಾಗುವ ಮತ್ತು ಕಟಾವು | 1. ಮಾಗಿರುವ ಹಣ್ಣುಗಳನ್ನು ಕಟಾವು ಮಾಡಿ ಮಾರಾಟ ಮಾಡಬಹುದು |
| ಮಾವು | ಹೂವಿನ ಕುಡಿ ಚಿಗುರುವ ಮತ್ತು ಹೂವಿನ ಹಂತ | 1. ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ)<br>2. ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>3. ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |
| **ಪಶುಸಂಗೋಪನೆ** | | 1. ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>2. ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>3. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |
| **ಕೋಳಿ ಸಾಕಾಣಿಕಾ** | | 1. ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>2. ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>3. ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಫ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>4. ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |
| **ರೇಷ್ಮೆ ಸಾಕಾಣಿಕೆ** | | 1. **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>**2.** ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>**3.** ಜ್ವರಕ್ಕೆ ಕೂತಾಗ ಹಾಸಿಗೆಯನ್ನು ಲಘುವಾಗಿ ಹರಿದು ಸುಣ್ಣದ ಪುಡಿಯನ್ನು (5–6 ಗ್ರಾಂ/ಚದರ ಅಡಿಗೆ) ಧೂಳೀಕರಿಸುವುದನ್ನು ಮರೆಯಬಾರದು.<br>**4.** ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು $22^0$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುವ್ಯದು ಅವಶ್ಯಕ.<br>**5.** ಹಾಸಿಗೆಯನ್ನು ತೆಳುವಾಗಿಟ್ಟು ಹಳೆ ಹಾಸಿಗೆ ಒಣಗುವಂತೆ ಸುಣ್ಣವನ್ನು ಹಂತಕ್ಕೆ ತಕ್ಕಂತೆ ಸರಿ ಪ್ರಮಾಣದಲ್ಲಿ ಧೂಳೀಕರಿಸಿ ನೋಡಿಕೊಳ್ಳಬೇಕು.<br>**6.** ಬಲೆಯನ್ನು ಬಳಸಿ ಹಾಸಿಗೆಯನ್ನು ಸ್ವಚ್ಛಗೊಳಿಸಬೇಕು ಮತ್ತು ರೋಗಗ್ರಸ್ಥ ಹುಳುಗಳನ್ನು ಆಯ್ದು ಮಣ್ಣಿನಲ್ಲಿ ಹೂತು ಹಾಕಿ ನಾಶಪಡಿಸಬೇಕು. ಸಾಕಾಣಿಕೆ ಮನೆ ಮತ್ತು ಅದರ ಸುತ್ತಲೂ ಶೇ.5ರ ಬ್ಲೀಚಿಂಗ್ ಪುಡಿ ಮತ್ತು ಸುಣ್ಣದ ಮಿಶ್ರಣವನ್ನು (1:19) ಧೂಳೀಕರಿಸಬೇಕು ಹಾಗೂ ವೈಯಕ್ತಿಕ ಶುಭ್ರತೆಯನ್ನು ಕಾಪಾಡಬೇಕು.<br>7. ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ |

| | |
|---|---|
| | ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |

**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಫ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.